# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 839 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಪಿ.ಆರ್ ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವವರು | : | ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 09.03.2021 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಸರ್ಕಾರದಿಂದ ಅನುಮತಿ ಪಡೆದು ಸ್ಥಾಪಿತವಾಗಿರುವ ಮತ್ತು ಚಾಲ್ತಿಯಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ ತಾಲ್ಲೂಕುವಾರು / ಗ್ರಾಮವಾರು ವಿವರ ನೀಡುವುದು) | ರಾಜ್ಯದಲ್ಲಿ 30.07.2020 ರ ವರೆಗೆ ರಾಜ್ಯದಲ್ಲಿ 8,75,336 ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ನೋಂದಣಿಯಾಗಿದ್ದು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| (ಆ) | ಈ ಸಣ್ಣ ಕೈಗಾರಿಕೆಗಳಲ್ಲಿ/ಕಾರ್ಖಾನೆಗಳಲ್ಲಿ ಉದ್ಯೋಗ ಮಾಡುತ್ತಿರುವವರ ಸಂಖ್ಯೆ ಎಷ್ಟು;<br>(ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು) | ಒಟ್ಟು ನೋಂದಣಿಯಾದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ಒಟ್ಟು 60,21,569 ಉದ್ಯೋಗ ಸೃಜನೆಯಾಗಿರುವುದಾಗಿ ಕೈಗಾರಿಕೆಗಳು ನೊಂದಾಯಿಸಿದ್ದು, ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| (ಇ) | ರಾಜ್ಯ ಸರ್ಕಾರದಿಂದ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಮತ್ತು ನಿರ್ವಹಣೆಗೆ ನೆರವಾಗುವ ಯೋಜನೆಗಳು ಯಾವುವು: (ವಿವರ ನೀಡುವುದು) | ರಾಜ್ಯ ಸರ್ಕಾರದಿಂದ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಮತ್ತು ನಿರ್ವಹಣೆಗೆ ನೆರವಾಗುವ ಯೋಜನೆಗಳು ಈ ಕೆಳಗಿನಂತಿವೆ:-<br><br>1. ಎಂ.ಎಸ್.ಎಂ.ಇ ಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರವು ಸರ್ಕಾರದ ಆದೇಶ ಸಂಖ್ಯೆ: ಸಿಐ 199 ಎಸ್‌ಪಿಐ 2018, ದಿನಾಂಕ 13.8.2020 ರನ್ವಯ ಹೊಸ ಕೈಗಾರಿಕಾ ನೀತಿ 2020-25 ನ್ನು ಜಾರಿಗೆ ತಂದಿರುತ್ತದೆ. ಇದರನ್ವಯ ದೊರೆಯುವ ಪ್ರೋತ್ಸಾಹ ಮತ್ತು ರಿಯಾಯಿತಿಗಳು ಈ ಕೆಳಗಿನಂತಿವೆ:-<br><br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆ ನೀರುಕೊಯ್ಲು / ಸಂರಕ್ಷಣೆ ಸಹಾಯಧನ |

| | | |
|---|---|---|
| | | 2. ಕೇಂದ್ರ ಸರ್ಕಾರದ **ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ** ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ.25.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು. ಹಾಗೂ ಯೋಜನಾ ವೆಚ್ಚದ ಮೇಲೆ ಶೇ.15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br>3. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇ.6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br>4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ.75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಠ 2 ಎಕರೆ) ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.<br>5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಗುಡಿ ಮತ್ತು ಸೂಕ್ಷ್ಮ ಕೈಗಾರಿಕಾ ಘಟಕ ಸ್ಥಾಪಿಸಲು ಯೋಜನಾ ವೆಚ್ಚದ ಮೇಲೆ ಶೇ.60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br>6. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.2.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿರಹಿತ ಗರಿಷ್ಠ ರೂ.33 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ. |
| (ಈ) | ಕರೋನ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಭಾದಿತರಾಗಿ ಅಧಿಕೃತವಾಗಿ ಮುಚ್ಚಿರುವ ಕಾರ್ಖಾನೆಗಳ/ಕೈಗಾರಿಕೆಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು/ ತಾಲ್ಲೂಕುವಾರು / ಗ್ರಾಮವಾರು ವಿವರ ನೀಡುವುದು) | ಕರೋನ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಭಾಧಿತರಾಗಿ ಅಧಿಕೃತವಾಗಿ ಮುಚ್ಚಿರುವ ಕಾರ್ಖಾನೆಗಳು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ನೋಂದಾಯಿಸಲು ಯಾವುದೇ ವ್ಯವಸ್ಥೆ ಇಲ್ಲದಿರುವುದರಿಂದ ಅಂಕಿ ಅಂಶಗಳು ಲಭ್ಯವಿರುವುದಿಲ್ಲ. |

ಸಿಐ 31 ಎಸ್‌ಎಸ್‌ಐ 2021

*(ಸಿ.ಸಿ ಪಾಟೀಲ್)*

ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು
ಸಾರ್ವಜನಿಕ ಸಂಪರ್ಕ ಸಚಿವರು

**REGISTRATION OF MSME UNITS UPTO JUNE 2020**

| # | DISTRICT | UNIT in Nos. | INVEST Rs: Lakhs | EMP in Nos. |
|---|---|---|---|---|
| 1 | Bagalkot | 19,009 | 1,50,112.84 | 86,010 |
| 2 | Bellary | 29,754 | 3,91,790.99 | 1,83,234 |
| 3 | Belguam | 87,840 | 6,84,013.10 | 3,93,079 |
| 4 | Bangalore (U) | 2,14,555 | 37,02,905.69 | 21,69,212 |
| 5 | Bangalore (R) | 63,293 | 12,46,687.08 | 5,72,024 |
| 6 | Bidar | 12,656 | 1,13,373.85 | 79,653 |
| 7 | CH Nagar | 4,527 | 33,521.56 | 25,821 |
| 8 | Chikmagalur | 14,057 | 81,425.07 | 58,887 |
| 9 | Chikkkaballapur | 4,584 | 75,969.21 | 29,010 |
| 10 | Chitradurga | 17,900 | 1,30,927.62 | 94,522 |
| 11 | D.Kannada | 42,441 | 3,43,626.39 | 2,78,075 |
| 12 | Davangere | 12,817 | 1,62,900.72 | 63,675 |
| 13 | Dharwad | 53,062 | 4,39,158.53 | 2,91,728 |
| 14 | Gadag | 8,232 | 61,571.87 | 39,105 |
| 15 | Hassan | 18,758 | 1,22,051.77 | 91,321 |
| 16 | Haveri | 9,777 | 77,871.40 | 42,422 |
| 17 | Kalburgi | 24,456 | 1,65,487.46 | 1,16,824 |
| 18 | Kodagu | 5,740 | 40,268.99 | 35,535 |
| 19 | Kolar | 19,959 | 2,14,411.53 | 1,40,342 |
| 20 | Koppal | 7,365 | 1,23,576.90 | 40,864 |
| 21 | Mandya | 15,210 | 1,09,054.75 | 78,030 |
| 22 | Mysore | 45,938 | 3,90,685.07 | 2,71,426 |
| 23 | Raichur | 16,081 | 1,94,903.53 | 97,714 |
| 24 | Ramanagara | 7,150 | 1,72,239.91 | 63,264 |
| 25 | Shimoga | 27,142 | 1,56,974.45 | 1,35,648 |
| 26 | Tumukur | 36,348 | 3,72,238.61 | 2,14,433 |
| 27 | Udupi | 12,882 | 1,99,670.83 | 1,03,683 |
| 28 | U.Kannada | 18,866 | 1,10,453.30 | 94,693 |
| 29 | Vijapur | 22,269 | 1,49,711.07 | 1,18,383 |
| 30 | Yadgir | 2,668 | 38,236.96 | 12,952 |
| | **Total** | **8,75,336** | **1,02,55,821.04** | **60,21,569** |